ಸತ್ಯವಿಶ್ವಾಸಿಯು ದೂಷಿಸುವವನಲ್ಲ, ಶಪಿಸುವವನಲ್ಲ, ಅಶ್ಲೀಲವಾಗಿ ಮಾತನಾಡುವವನಲ್ಲ ಅಥವಾ ಅವಾಚ್ಯ ಶಬ್ದಗಳನ್ನು ಬಳಸುವವನಲ್ಲ

ಅಬ್ದುಲ್ಲಾ ಬಿನ್ ಮಸ್ಊದ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು
ಹೇಳಿದರು: ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ)
ಹೇಳಿದರು: "ಸತ್ಯವಿಶ್ವಾಸಿಯು ದೂಷಿಸುವವನಲ್ಲ, ಶಪಿಸುವವನಲ್ಲ, ಅಶ್ಲೀಲವಾಗಿ ಮಾತನಾಡುವವನಲ್ಲ ಅಥವಾ ಅವಾಚ್ಯ ಶಬ್ದಗಳನ್ನು ಬಳಸುವವನಲ್ಲ."
[صحيح] [رواه الترمذي]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ತಿಳಿಸುವುದೇನೆಂದರೆ, ಜನರ ವಂಶವನ್ನು ಟೀಕಿಸುವುದು, ಅತ್ಯಧಿಕವಾಗಿ ದೂಷಿಸುವುದು ಮತ್ತು ಶಪಿಸುವುದು, ಯಾವುದೇ ನಾಚಿಕೆಯಿಲ್ಲದೆ ದೈಹಿಕವಾಗಿ ಮತ್ತು ಮೌಖಿಕವಾಗಿ ಅಶ್ಲೀಲವಾಗಿ ವರ್ತಿಸುವುದು ಪೂರ್ಣರೂಪದ ಸತ್ಯವಿಶ್ವಾಸವನ್ನು ಹೊಂದಿರುವ ಸತ್ಯವಿಶ್ವಾಸಿಯ ಸ್ವಭಾವಗಳಲ್ಲ.

http://sunnah.global/hadeeth/kn/show/65869